ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ 57)
ನಮೂನೆ ಸಂಖ್ಯೆ 4

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸೆಷನ್ಸ್ ಕೇಸ್ ನಂಬರ್ : 214/2021**

**ಫ್ರಾಸಾ- 3 ಚಾಸಾ- 4**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ನಾರಾಯಣ |
| ತಂದೆಯ ಹೆಸರುಃ | : | ಬೇಲೂರೇಗೌಡ |
| ವಯಸ್ಸುಃ | : | 60 ವರ್ಷ |
| ಉದ್ಯೋಗಃ | : | ವ್ಯವಸಾಯ |
| ವಾಸ | : | ಕಾಳೇನಹಳ್ಳಿ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:27-02-2026:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಈಗ ತೋರಿಸಿದ ನಿಪಿ-2 ರಲ್ಲಿರುವ ರುಜು ನನ್ನದೆ. ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. 5 ವರ್ಷಗಳ ಹಿಂದೆ ಈ ಸಹಿಹಾಕಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಪೊಲೀಸರು ಓದಿ ಹೇಳಿಲ್ಲ. ನನಗೆಓದಲು ಬರೆಯಲು ಬರುವುದಿಲ್ಲ. ನನ್ನನ್ನು ಪೊಲೀಸರು ಘಟನಾ ಸ್ಥಳವಾದ ಗಾಡೇನಹಳ್ಳಿ ಕಡೆಗೆ ಹೋಗುವ ತಾರು ರಸ್ತೆಬಳಿ ಇರುವ ಶರತ್ ಎಂಬುವವರಿಗೆ ಸೇರಿದ ಹಳೆಯ ಗೊಬ್ಬರ ಮಿಕ್ಸಿಂಗ್ ಫ್ಯಾಕ್ಟರಿಗೆ ಸೇರಿದ ರಸ್ತೆಗೆ ಕರೆಸಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ದಿನಾಂಕ 28-12-18ರಂದು ಬೆಳಿಗ್ಗ 10ವರೆ ಗಂಟೆಗೆ ಪೊಲೀಸರು ಗಾಡೇನಹಳ್ಳಿ ಕಡೆಗೆ ಹೋಗುವ ತಾರು ರಸ್ತೆಬಳಿ ಇರುವ ಶರತ್ ಎಂಬುವವರಿಗೆ ಸೇರಿದ ಹಳೆಯ ಗೊಬ್ಬರ ಮಿಕ್ಸಿಂಗ್

ಫ್ಯಾಕ್ಟರಿಗೆ ಸೇರಿದ ರಸ್ತೆಗೆ ಕರೆಸಿದ್ದರು ಎಂದರೆ ಸರಿಯಲ್ಲ. ಅಲ್ಲಿ ಚಾಸಾ-1 ರವರು ಇದೇ ಸ್ಥಳದಲ್ಲಿ ಆರೋಪಿ ತಮ್ಮನ್ನು ತಡೆದು ನಿಲ್ಲಿಸಿ ಚಿನ್ನದ ಸರಗಳನ್ನು ದೋಚಿದ್ದೆಂದು ತೋರಿಸಿದ್ದು ಅಲ್ಲಿ ನನ್ನ ಸಮಕ್ಷಮ ನಿಪಿ-2 ರಂತೆ ಪಂ ಚನಾಮೆ ಬರೆದು ಸಹಿ ಪಡೆದರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**